**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ 72 ರ ನಿಯಮದ ಮೇರೆಗೆ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯ ಉತ್ತರ.**

ಪ್ರಶ್ನೆ:

2019-20ನೇ ಸಾಲಿನಲ್ಲಿ ಕ್ರೈಸ್ತ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ನಿಗಮ ಘೋಷಣೆಯನ್ನು ಪ್ರಕಟಿಸಿ ಹಣವನ್ನು ಮೀಸಲಿರಿಸಿದ್ದರೂ ಅಧಿಕಾರಿಗಳು ತಮ್ಮ ನಿರ್ಲಕ್ಷದಿಂದ ನಿಗಮದ ಕಾರ್ಯನಿರ್ವಹಣೆ ಮಾಡದೇ ಇರುವುದರ ಬಗ್ಗೆ ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

2019-20ನೇ ಸಾಲಿನ ಆಯವ್ಯಯ ಕಂಡಿಕೆ 182ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಹೊಸದಾಗಿ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಮೂಲಕ ಕ್ರಿಶ್ಚಿಯನ್ ಸಮುದಾಯದ ಸಮಗ್ರ ಅಭಿವೃದ್ಧಿ ಕಾರ್ಯಕ್ರಮವನ್ನು ರೂ 200 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳಲಾಗುವುದು ಎಂದು ಘೋಷಿಸಿರುತ್ತಾರೆ.

ಕ್ರಿಶ್ಚಿಯನ್ ಅಭಿವೃದ್ಧಿ ನಿಗಮವನ್ನು ಹೊಸದಾಗಿ ಸ್ಥಾಪಿಸಲು (1) ಸಾರ್ವಜನಿಕ ಉದ್ದಿಮೆಗಳ ಇಲಾಖೆ (2) ಯೋಜನಾ ಇಲಾಖೆ (3) ಆರ್ಥಿಕ ಇಲಾಖೆಯ ಅನುಮೋದನೆಯನ್ನು ನಿಯಮಾನುಸಾರ ಪಡೆಯುವುದು ಅತ್ಯವಾಶ್ಯಕವಾಗಿರುತ್ತದೆ.

ಅದರಂತೆ, ಕ್ರಿಶ್ಚಿಯನ್ ಅಭಿವೃದ್ಧಿ ನಿಗಮಕ್ಕೆ ಸಂಬಂಧಪಟ್ಟಂತೆ, Memorandum of Association ಮತ್ತು Articles of Association ತಯಾರಿಸಿ ಸಾರ್ವಜನಿಕ ಉದ್ದಿಮೆಗಳ ಇಲಾಖೆ ಇವರ ಸಹಮತಿಗೆ ಕಳುಹಿಸಕೊಡಲಾಗಿತ್ತು. ಸದರಿ ಇಲಾಖೆಯವರು ಟಿಪ್ಪಣಿ ಸಂಖ್ಯೆ: ಸಾಉಇ/32/ ಎ.ಆರ್.ಯು/2019, ದಿನಾಂಕ:09.12.2019 ರಂದು ನೀಡಿರುವ ಅಭಿಪ್ರಾಯದಲ್ಲಿ ಪ್ರಸ್ತಾವನೆಗೆ ಸಹಮತಿ ನೀಡುತ್ತಾ, ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಲು ಸೂಚಿಸಿರುತ್ತಾರೆ.

ಕ್ರಿಶ್ಚಿಯನ್ ಅಭಿವೃದ್ಧಿ ನಿಗಮವನ್ನು ಹೊಸದಾಗಿ ಸ್ಥಾಪಿಸುವ ಬಗ್ಗೆ ಯೋಜನಾ ಇಲಾಖೆಯವರು ಟಿಪ್ಪಣಿ ಸಂಖ್ಯೆ: ಪಿಡಿಎಸ್ 41 ಐ.ಎಂ.ಎಂ/2019, ದಿನಾಂಕ:21.12.2019ರಂದು ಹೊಸ ಹುದ್ದೆಗಳ ಸೃಜನೆ ಹಾಗೂ ತಗಲುವ ಆಡಳಿತಾತ್ಮಕ ವೆಚ್ಚಗಳಿಗೆ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಮತ್ತು ನಿಯಮಾನುಸಾರ ಪಾರಾದರ್ಶಕತೆಯೊಂದಿಗೆ ಸದರಿ ನಿಗಮವನ್ನು ಸ್ಥಾಪಿಸಲು ಸಹಮತಿ ನೀಡಿರುತ್ತಾರೆ.

ಪ್ರಸ್ತಾಪಿತ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಸ್ಥಾಪನೆಗೆ ಯೋಜನಾ ಇಲಾಖೆ ಮತ್ತು ಸಾರ್ವಜನಿಕ ಉದ್ದಿಮೆಗಳ ಇಲಾಖೆ ಇವರು ಈಗಾಗಲೇ ಸಹಮತಿ ನೀಡಿರುತ್ತಾರೆ. ಪ್ರಸ್ತುತ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಲು ಸೂಚಿಸಿರುವ ಹಿನ್ನೆಲೆಯಲ್ಲಿ. ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಅನುಮೋದನೆಗಾಗಿ ದಿನಾಂಕ:11-12-2019ರಂದು ಕಡತವನ್ನು ಕಳುಹಿಸಿಕೊಡಲಾಗಿದೆ. ಆರ್ಥಿಕ ಇಲಾಖೆಯ ಸಹಮತಿ ಬಂದ ನಂತರ ನಿಗಮದ ರಚನೆಗೆ ಕ್ರಮ ಕೈಗೊಳ್ಳಲಾಗುವುದು.

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರ

D:\Sumaiya-\UNSTARRED - 2020\132 MDS REPLY.docx